ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

**ದೂರವಾಣಿ: 080-22212652, 22212941**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/238/ವಿ.ಅ.ಕಾ.ನಿ/2019-20

ದಿನಾಂಕ: 22.01.2020 23

## ಅಧಿಕೃತ ಜ್ಞಾಪನ

**ವಿಷಯ:** ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:** ಗೌರವಾಧ್ಯಕ್ಷರು, ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘ, (ನೋಂ.) ರವರ ಪತ್ರ ಸಂಖ್ಯೆ:ಕಾಶಿಇ/ಆನೌ:ಸಂ:26:2019-20

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘದ ರಾಜ್ಯ ಮಟ್ಟದ ಸಮ್ಮೇಳನ ಹಾಗೂ ವಿಚಾರ ಸಂಕೀರ್ಣವನ್ನು ದಿನಾಂಕ:01.02.2020 ರಂದು ಬೆಳಗ್ಗೆ 11.00 ಗಂಟೆಗೆ ತುಮಕೂರಿನ ಸಿದ್ಧಗಂಗಾ ಮಠದ ಆವರಣದಲ್ಲಿ ಏರ್ಪಡಿಸಲಾಗಿದ್ದು, ಸದರಿ ಸಮ್ಮೇಳನ ಹಾಗೂ ವಿಚಾರ ಸಂಕಿರಣದಲ್ಲಿ ಭಾಗವಹಿಸಲು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕೇತರ ನೌಕರರುಗಳಿಗೆ ಅನುಮತಿ ನೀಡಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ತುಮಕೂರು ಜಿಲ್ಲೆಯ ನೌಕರರುಗಳಿಗೆ ದಿನಾಂಕ:01.02.2020 ರಂದು ಹಾಗೂ ಇತರೆ ಜಿಲ್ಲೆಗಳ ನೌಕರರುಗಳಿಗೆ ದಿನಾಂಕ:31.01.2020 ಹಾಗೂ 01.02.2020 ಎರಡು ದಿನಗಳಿಗೆ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

23/01/2020

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ. – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಗೌರವಾಧ್ಯಕ್ಷರು, ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘ (ನೋಂ.) ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಯ ಆವರಣ, ಅರಮನೆ ರಸ್ತೆ, ಬೆಂಗಳೂರು-560 001.
4. ಕಛೇರಿ ಪ್ರತಿ.